## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಪರಿಷ್ಕೃತ ಮಹಾಯೋಜನೆ-2031ಕ್ಕೆ ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ನಅಇ 540 ಬೆಂಅಸೇ 2004, ದಿನಾಂಕ: 25-06-2007.
2. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/RMP-2031/1312/2017-18, ದಿನಾಂಕ:12-10-2017.
3. ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: BMRDA/BDA/Master Plan/2006-07(Part-II), ದಿನಾಂಕ:03-11-2017.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಲಾಗಿದ್ದ ಪರಿಷ್ಕೃತ ಮಹಾಯೋಜನೆ-2015ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರಡಿಯಲ್ಲಿ ಸರ್ಕಾರದ ಅಂತಿಮ ಅನುಮೋದನೆ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (2) ರಲ್ಲಿನ ಪತ್ರದಲ್ಲಿ ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಬೆಂಗಳೂರು ನಗರ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಪರಿಷ್ಕೃತ ಮಹಾಯೋಜನೆ-2031ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರಡಿಯಲ್ಲಿ ಸರ್ಕಾರದ ತಾತ್ಕಾಲಿಕ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರಿಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿನ ಪತ್ರದಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ತಯಾರಿಸಿ ಸಲ್ಲಿಸಿರುವ ಬೆಂಗಳೂರು ನಗರದ ಸ್ಥಳೀಯ ಯೋಜನಾ ಪ್ರದೇಶದ ತಾತ್ಕಾಲಿಕ "ಪರಿಷ್ಕೃತ ಮಹಾಯೋಜನೆ-2031"ನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರಡಿಯಲ್ಲಿ ಸರ್ಕಾರದ ತಾತ್ಕಾಲಿಕ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮಹಾಯೋಜನೆಯನ್ನು ತಯಾರಿಸುವ ಉದ್ದೇಶದ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 10(1) ರಡಿಯಲ್ಲಿ ದಿನಾಂಕ:07-05-2012ರ ರಾಜ್ಯ ಪತ್ರದಲ್ಲಿ ಹಾಗೂ ದಿನಾಂಕ:08-05-2012ರ ದಿನಪತ್ರಿಕೆಯಲ್ಲಿ ಪ್ರಕಟಿಸಿ ಕಾನೂನಿನ್ವಯ ಎಲ್ಲಾ ಪ್ರಕ್ರಿಯೆಗಳನ್ನು ಕೈಗೊಂಡು ತಾತ್ಕಾಲಿಕ ಮಹಾಯೋಜನೆಯನ್ನು ತಯಾರಿಸಿರುತ್ತದೆ.

ಸದರಿ ತಾತ್ಕಾಲಿಕ ಮಹಾಯೋಜನೆಯಲ್ಲಿ 2031ನೇ ಇಸವಿಗೆ ಆಗಬಹುದಾದ ಸಂಭವನೀಯ ಜನಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ಜನಸಾಂದ್ರತೆಗನುಗುಣವಾಗಿ 2015ನೇ ಮಹಾಯೋಜನೆಗಿಂತ ಕೇವಲ 80 ಚದರ ಕಿಲೋ ಮೀಟರ್ ಪ್ರದೇಶವನ್ನು ಮಾತ್ರ ಹೆಚ್ಚುವರಿ ನಗರೀಕರಣ ಪ್ರದೇಶವನ್ನಾಗಿ ಪ್ರಸ್ತಾಪಿಸಲಾಗಿದೆ.

ನಗರೀಕರಣಕ್ಕೆ ಅವಶ್ಯಕವಾಗುವ ವ್ಯವಸ್ಥೆಗಳಾದ ಸಾರಿಗೆ ಮತ್ತು ಸಂಚಾರ ವ್ಯವಸ್ಥೆ, ಸಂಪರ್ಕ ರಸ್ತೆಗಳು, ವಸತಿ ಸೌಲಭ್ಯದ ಬೇಡಿಕೆ, ನೀರು ಸರಬರಾಜು ಬೇಡಿಕೆ, ಘನ ತ್ಯಾಜ್ಯ ನಿರ್ವಹಣೆಗೆ ಬೇಕಾದ ಜಮೀನು, ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಬೇಡಿಕೆಗಳು, ದೊಡ್ಡ ಉದ್ಯಾನವನಗಳು(Tree Park), ವಲಯ ನಿಯಮಾವಳಿಗಳು ಮುಂತಾದ ಪ್ರಮುಖ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಪರಿಷ್ಕೃತ ಮಹಾಯೋಜನೆ-2031ನ್ನು ತಯಾರಿಸಿರುವುದಾಗಿ ಪ್ರಸ್ತಾವನೆಯಲ್ಲಿ ವಿವರಿಸಲಾಗಿದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 516 ಬೆಂಅಸೇ 2017, ಬೆಂಗಳೂರು ದಿನಾಂಕ: 22-11-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ತಯಾರಿಸಿ ಸಲ್ಲಿಸಿರುವ ಬೆಂಗಳೂರು ನಗರ ಸ್ಥಳೀಯ ಯೋಜನಾ ಪ್ರದೇಶದ ಪರಿಷ್ಕೃತ ಮಹಾಯೋಜನೆ-2031ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರಡಿಯಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

1. ಪ್ರಸ್ತಾಪಿತ ತಾತ್ಕಾಲಿಕ ಮಹಾಯೋಜನೆಯನ್ನು ಸಾರ್ವಜನಿಕವಾಗಿ ಪ್ರಕಟಿಸಿ 60 ದಿನಗಳ ಕಾಲಾವಕಾಶ ನೀಡಿ, ಮಹಾಯೋಜನೆ ಕುರಿತಂತೆ ಸಾರ್ವಜನಿಕರಿಂದ ಸಲಹೆ ಮತ್ತು ಆಕ್ಷೇಪಣೆಗಳನ್ನು ಸ್ವೀಕರಿಸುವುದು;

2. ಇದುವರೆಗೆ ಸರ್ಕಾರವು ಅನುಮೋದಿಸಿದ ವಲಯ ಬದಲಾವಣೆ ಮತ್ತು ಪ್ರಾಧಿಕಾರವು ಅನುಮೋದಿಸಿದ ವಿನ್ಯಾಸ ಹಾಗೂ ಇತರೆ ಅಭಿವೃದ್ಧಿ ಅನುಮೋದನೆ ಯೋಜನೆಗಳಿಗೆ ನೀಡಲಾದ ಪ್ರಕರಣಗಳನ್ನು ತಪ್ಪದೆ ಅಳವಡಿಸಿಕೊಳ್ಳತಕ್ಕದ್ದು;

3. ಪರಿಸರ ಸೂಕ್ಷ್ಮ ಪ್ರದೇಶಗಳಾದ ಕಣಿವೆಗಳು, ನದಿತೊರೆ ಪಾತ್ರಗಳು, ಕೆರೆಯ ಅಂಗಳಗಳು ಮುಂತಾದವುಗಳನ್ನು ಸೂಕ್ತವಾಗಿ ಅಳವಡಿಸಿಕೊಂಡು ಭೂ ಉಪಯೋಗ ಪ್ರಸ್ತಾಪಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು;

4. ನಕ್ಷೆಗಳಲ್ಲಿ ಅಳವಡಿಸಲಾದ ಕೆಡೆಸ್ಟ್ರಿಯಲ್ ಮಾಹಿತಿಗಳು ಸರಿಯಾಗಿ ಅಳವಡಿಸಿದ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು;

5. ಹಾಲಿ ಅಭಿವೃದ್ಧಿಗೊಂಡ ಮತ್ತು ಅನುಮೋದಿತ ವಿನ್ಯಾಸಗಳ ಉದ್ಯಾನವನ ಮತ್ತು ನಾಗರಿಕ ಸೌಲಭ್ಯ ನಿವೇಶನಗಳನ್ನು ಪ್ರಸ್ತಾವಿತ ಭೂ ಉಪಯೋಗ ನಕ್ಷೆಗಳಲ್ಲಿ ತಪ್ಪದೇ ಅಳವಡಿಸಿಕೊಳ್ಳತಕ್ಕದ್ದು;

Attested

ಕೆ.ಎ. ಹಿದಾಯತ್ತುಲ್ಲ
ಸರ್ಕಾರದ ಉಪ ಕಾರ್ಯದರ್ಶಿ-3
ನಗರಾಭಿವೃದ್ಧಿ ಇಲಾಖೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ನರಸಿಂಹಮೂರ್ತಿ) 2/11/17
ಸರ್ಕಾರದ ಉಪ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಸದರಿ ಆದೇಶವನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 200 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಹಾಗೂ 200 ಪ್ರತಿಗಳನ್ನು ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿ:

1) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
2) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ, ಬೆಂಗಳೂರು
4) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5) ಅಧ್ಯಕ್ಷರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.
6) ಆಯುಕ್ತರು, ನಗರ ಭೂಸಾರಿಗೆ ನಿರ್ದೇಶನಾಲಯ, ಬೆಂಗಳೂರು.
7) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೆ.ಐ.ಎ.ಡಿ.ಬಿ., ಬೆಂಗಳೂರು.
8) ನಗರ ಯೋಜನಾ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
9) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
10) ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
11) ಮಾನ್ಯ ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
12) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.
13) ಶಾಖಾರಕ್ಷಾ ಕಡತ.
14) ಹೆಚ್ಚುವರಿ ಪ್ರತಿಗಳು.

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-I | ಬೆಂಗಳೂರು, ಗುರುವಾರ, ನವೆಂಬರ್ ೨೩, ೨೦೧೭ (ಮಾರ್ಗಶಿರಾ ೨, ಶಕ ವರ್ಷ ೧೯೩೯) | ನಂ.೧೦೫೯ |
|---|---|---|
| Part-I | Bengaluru, Thursday, November 23, 2017 (Margashira 2, Shaka Varsha 1939) | No. 1059 |


## ಕರ್ನಾಟಕ ಸರ್ಕಾರದ ನಡವಳಿಗಳು

### ನಗರಾಭಿವೃದ್ಧಿ ಸಚಿವಾಲಯ

**ವಿಷಯ:** ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಪರಿಷ್ಕೃತ ಮಹಾಯೋಜನೆ-2031ಕ್ಕೆ ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ನಅಇ 540 ಬೆಂಆಸೇ 2004, ದಿನಾಂಕ: 25-06-2007.
2. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/RMP-2031/1312/2017-18, ದಿನಾಂಕ:12-10-2017.
3. ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: BMRDA/BDA/Master Plan/2006-07(Part-II), ದಿನಾಂಕ:03-11-2017.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಲಾಗಿದ್ದ ಪರಿಷ್ಕೃತ ಮಹಾಯೋಜನೆ-2015ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರಡಿಯಲ್ಲಿ ಸರ್ಕಾರದ ಅಂತಿಮ ಅನುಮೋದನೆ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (2) ರಲ್ಲಿನ ಪತ್ರದಲ್ಲಿ ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಬೆಂಗಳೂರು ನಗರ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಪರಿಷ್ಕೃತ ಮಹಾಯೋಜನೆ-2031ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರಡಿಯಲ್ಲಿ ಸರ್ಕಾರದ ತಾತ್ಕಾಲಿಕ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರಿಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿನ ಪತ್ರದಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ತಯಾರಿಸಿ ಸಲ್ಲಿಸಿರುವ ಬೆಂಗಳೂರು ನಗರದ ಸ್ಥಳೀಯ ಯೋಜನಾ ಪ್ರದೇಶದ ತಾತ್ಕಾಲಿಕ "ಪರಿಷ್ಕೃತ ಮಹಾಯೋಜನೆ-2031"ನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರಡಿಯಲ್ಲಿ ಸರ್ಕಾರದ ತಾತ್ಕಾಲಿಕ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮಹಾಯೋಜನೆಯನ್ನು ತಯಾರಿಸುವ ಉದ್ದೇಶದ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 10(1) ರಡಿಯಲ್ಲಿ ದಿನಾಂಕ:07-05-2012ರ ರಾಜ್ಯ ಪತ್ರದಲ್ಲಿ ಹಾಗೂ ದಿನಾಂಕ:08-05-2012ರ ದಿನಪತ್ರಿಕೆಯಲ್ಲಿ ಪ್ರಕಟಿಸಿ ಕಾನೂನಿನನ್ವಯ ಎಲ್ಲಾ ಪ್ರಕಾರ್ಯಗಳನ್ನು ಕೈಗೊಂಡು ತಾತ್ಕಾಲಿಕ ಮಹಾಯೋಜನೆಯನ್ನು ತಯಾರಿಸಿರುತ್ತದೆ.

ಸದರಿ ತಾತ್ಕಾಲಿಕ ಮಹಾಯೋಜನೆಯಲ್ಲಿ 2031ನೇ ಇಸವಿಗೆ ಆಗಬಹುದಾದ ಸಂಭವನೀಯ ಜನಸಂಖ್ಯೆಯನ್ನು ಗಮನದಲ್ಲಿಟ್ಟಿಕೊಂಡು ಜನಸಾಂದ್ರತೆಗನುಗುಣವಾಗಿ 2015ನೇ ಮಹಾಯೋಜನೆಗಿಂತ ಕೇವಲ 80 ಚದರ ಕಿಲೋ ಮೀಟರ್ ಪ್ರದೇಶವನ್ನು ಮಾತ್ರ ಹೆಚ್ಚುವರಿ ನಗರೀಕರಣ ಪ್ರದೇಶವನ್ನಾಗಿ ಪ್ರಸ್ತಾಪಿಸಲಾಗಿದೆ.

ನಗರೀಕರಣಕ್ಕೆ ಅವಶ್ಯಕವಾಗುವ ವ್ಯವಸ್ಥೆಗಳಾದ ಸಾರಿಗೆ ಮತ್ತು ಸಂಚಾರ ವ್ಯವಸ್ಥೆ, ಸಂಪರ್ಕ ರಸ್ತೆಗಳು, ವಸತಿ ಸೌಲಭ್ಯದ ಬೇಡಿಕೆ, ನೀರು ಸರಬರಾಜು ಬೇಡಿಕೆ, ಘನ ತ್ಯಾಜ್ಯ ನಿರ್ವಹಣೆಗೆ ಬೇಕಾದ ಜಮೀನು, ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಬೇಡಿಕೆಗಳು, ದೊಡ್ಡ ಉದ್ಯಾನವನಗಳು(Tree Park), ವಲಯ ನಿಯಮಾವಳಿಗಳು ಮುಂತಾದ ಪ್ರಮುಖ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಪರಿಷ್ಕೃತ ಮಹಾಯೋಜನೆ-2031ನ್ನು ತಯಾರಿಸಿರುವುದಾಗಿ ಪ್ರಸ್ತಾವನೆಯಲ್ಲಿ ವಿವರಿಸಲಾಗಿದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 516 ಬೆಂಅಸೇ 2017, ಬೆಂಗಳೂರು ದಿನಾಂಕ: 22-11-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ತಯಾರಿಸಿ ಸಲ್ಲಿಸಿರುವ ಬೆಂಗಳೂರು ನಗರದ ಸ್ಥಳೀಯ ಯೋಜನಾ ಪ್ರದೇಶದ ಪರಿಷ್ಕೃತ ಮಹಾಯೋಜನೆ-2031ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರಡಿಯಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

1. ಪ್ರಸ್ತಾಪಿತ ತಾತ್ಕಾಲಿಕ ಮಹಾಯೋಜನೆಯನ್ನು ಸಾರ್ವಜನಿಕವಾಗಿ ಪ್ರಕಟಿಸಿ 60 ದಿನಗಳ ಕಾಲಾವಕಾಶ ನೀಡಿ, ಮಹಾಯೋಜನೆ ಕುರಿತಂತೆ ಸಾರ್ವಜನಿಕರಿಂದ ಸಲಹೆ ಮತ್ತು ಆಕ್ಷೇಪಣೆಗಳನ್ನು ಸ್ವೀಕರಿಸುವುದು;
2. ಇದುವರೆಗೆ ಸರ್ಕಾರವು ಅನುಮೋದಿಸಿದ ವಲಯ ಬದಲಾವಣೆ ಮತ್ತು ಪ್ರಾಧಿಕಾರವು ಅನುಮೋದಿಸಿದ ವಿನ್ಯಾಸ ಹಾಗೂ ಇತರೆ ಅಭಿವೃದ್ಧಿ ಅನುಮೋದನೆ ಯೋಜನೆಗಳಿಗೆ ನೀಡಲಾದ ಪ್ರಕರಣಗಳನ್ನು ತಪ್ಪದೆ ಅಳವಡಿಸಿಕೊಳ್ಳತಕ್ಕದ್ದು;
3. ಪರಿಸರ ಸೂಕ್ಷ್ಮ ಪ್ರದೇಶಗಳಾದ ಕಣಿವೆಗಳು, ನದಿತೊರೆ ಪಾತ್ರಗಳು, ಕೆರೆಯ ಅಂಗಳಗಳು ಮುಂತಾದವುಗಳನ್ನು ಸೂಕ್ತವಾಗಿ ಅಳವಡಿಸಿಕೊಂಡು ಭೂ ಉಪಯೋಗ ಪ್ರಸ್ತಾಪಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು;
4. ನಕ್ಷೆಗಳಲ್ಲಿ ಅಳವಡಿಸಲಾದ ಕೆಡೆಸ್ಟ್ರಿಯಲ್ ಮಾಹಿತಿಗಳು ಸರಿಯಾಗಿ ಅಳವಡಿಸಿದ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು;
5. ಹಾಲಿ ಅಭಿವೃದ್ಧಿಗೊಂಡ ಮತ್ತು ಅನುಮೋದಿತ ವಿನ್ಯಾಸಗಳ ಉದ್ಯಾನವನ ಮತ್ತು ನಾಗರಿಕ ಸೌಲಭ್ಯ ನಿವೇಶನಗಳನ್ನು ಪ್ರಸ್ತಾವಿತ ಭೂ ಉಪಯೋಗ ನಕ್ಷೆಗಳಲ್ಲಿ ತಪ್ಪದೇ ಅಳವಡಿಸಿಕೊಳ್ಳತಕ್ಕದ್ದು;

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಎನ್. ನರಸಿಂಹಮೂರ್ತಿ**
ಸರ್ಕಾರದ ಉಪ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ



| | | |
|---|---|---|
| ಭಾಗ-IVA | ಬೆಂಗಳೂರು, ಶನಿವಾರ, ನವೆಂಬರ್ ೨೫, ೨೦೧೭ (ಮಾರ್ಗಶಿರ ೪, ಶಕ ವರ್ಷ ೧೯೩೯) | ನಂ. ೧೦೭೩ |
| Part-IVA | Bengaluru, Saturday, November 25, 2017 (Margashira 4, Shaka Varsha 1939) | No. 1073 |



ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

ಟಿ.ಚೌಡಯ್ಯ ರಸ್ತೆ, ಕುಮಾರ ಪಾರ್ಕ್ ಪಶ್ಚಿಮ, ಬೆಂಗಳೂರು-560 020.

**ಅಧಿಸೂಚನೆ**

ಬೆಂಅಪ್ರಾ/ನಯೋಸ/RMP-2031/1538/2017-18, ದಿನಾಂಕ: 24-11-2017

**[ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13 (1) ರನ್ವಯ]**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13 (ಡಿ) ಅಡಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಪರಿಷ್ಕೃತ ಮಹಾಯೋಜನೆ-2031 (RMP-2031) ಅನ್ನು ಪ್ರಾಧಿಕಾರದಿಂದ ತಯಾರಿಸಿ, ಪರಿಷ್ಕೃತ ಮಹಾಯೋಜನೆ-2031 ಅನ್ನು ತಾತ್ಕಾಲಿಕ ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ಸರ್ಕಾರದ ಆದೇಶ ಸಂಖ್ಯೆ: ನಅಇ:516:ಬೆಂಅಸೇ:2017, ಬೆಂಗಳೂರು, ದಿನಾಂಕ: 22-11-2017 ರಲ್ಲಿ ಸರ್ಕಾರವು ಕೆಟಿಸಿಪಿ ಕಾಯ್ದೆ 1961 ರ ಕಲಂ 13 (1) ರಡಿಯಲ್ಲಿ ತಾತ್ಕಾಲಿಕ ಅನುಮೋದನೆ ನೀಡಿರುತ್ತದೆ.

ಕಲಂ 13 (1) ರಡಿಯಲ್ಲಿ ಅನುಮೋದನೆಯಾದ ಪರಿಷ್ಕೃತ ಮಹಾಯೋಜನೆ-2031 ರ ತಾತ್ಕಾಲಿಕ ಯೋಜನೆಗೆ ಸಂಬಂಧಿಸಿದಂತೆ, ಸಾರ್ವಜನಿಕರಿಂದ ಸಲಹೆ / ಅಭಿಪ್ರಾಯಗಳನ್ನು ತಿಳಿಸಲು ಅವಕಾಶವನ್ನು ಕಲ್ಪಿಸಿರುವುದರಿಂದ ಈ ಪ್ರಕಟಣೆಯನ್ನು ಹೊರಡಿಸಿದ 60 ದಿನಗೊಳಗಾಗಿ ನಿಮ್ಮ ಸಲಹೆ / ಆಕ್ಷೇಪಣೆಗಳನ್ನು ಲಿಖಿತವಾಗಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

ಸರ್ಕಾರವು ಅನುಮೋದಿಸಿರುವ ತಾತ್ಕಾಲಿಕ ಪರಿಷ್ಕೃತ ಮಹಾಯೋಜನೆ-2031 ರ ಭೂಉಪಯೋಗ ನಕ್ಷೆಗಳು ಮತ್ತು ವರದಿಗಳನ್ನು ದಿನಾಂಕ 25-11-2017 ರಿಂದ 23-01-2018 ರವರೆಗೆ ಸಾರ್ವಜನಿಕ ವೀಕ್ಷಣೆಗಾಗಿ ಬೆಂಗಳೂರು ನಗರದ ಬನಶಂಕರಿ 2ನೇ ಹಂತದಲ್ಲಿರುವ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಾಣಿಜ್ಯ ಸಂಕೀರ್ಣ ಕಟ್ಟಡದ 1ನೇ ಮಹಡಿಯಲ್ಲಿ ಪ್ರದರ್ಶಿಸಲಾಗಿರುತ್ತದೆ.

ಈ ಅವಕಾಶವನ್ನು ಉಪಯೋಗಿಸಿಕೊಂಡು ಸಾರ್ವಜನಿಕರು ಯೋಜನೆಯನ್ನು ಉತ್ತಮಪಡಿಸುವ ಬಗ್ಗೆ ಸಲಹೆ / ಅಭಿಪ್ರಾಯಗಳನ್ನು ಪ್ರದರ್ಶಿತ ಸ್ಥಳದಲ್ಲಿ ಲಭ್ಯವಿರುವ ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ಪ್ರದರ್ಶಿತ ಸ್ಥಳದಲ್ಲಿ ಲಿಖಿತವಾಗಿ ಸಲ್ಲಿಸಿ, ಸ್ವೀಕೃತಿ ಪಡೆಯಲು ಅಥವಾ ***ನಗರ ಯೋಜಕ ಸದಸ್ಯರು, ಕೊಠಡಿ ಸಂಖ್ಯೆ:210, 2ನೇ ಮಹಡಿ, ಬಿಡಿಎ ವಾಣಿಜ್ಯ ಸಂಕೀರ್ಣ, ಬನಶಂಕರಿ, 2ನೇ ಹಂತ, ಬೆಂಗಳೂರು-560 070 ಇವರಿಗೆ ನೋಂದಾಯಿತ ಅಂಚೆ ಮೂಲಕ*** ಅಥವಾ ಇಮೇಲ್ ವಿಳಾಸ suggestions.rmp2031@gamil.com ರ ಮುಖಾಂತರ ಕೂಡ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ನಿಗದಿತ ನಮೂನೆಯನ್ನು ಪ್ರಾಧಿಕಾರದ ಅಂತರ್ಜಾಲ ವಿಳಾಸ ***www.bdabangalore.org*** ರಲ್ಲಿ ಲಭ್ಯವಿರುತ್ತದೆ. ನಿಮ್ಮ ಸಲಹೆ / ಅಭಿಪ್ರಾಯಗಳನ್ನು ದಿನಾಂಕ 23-01-2018 ರೊಳಗೆ ಸಲ್ಲಿಸತಕ್ಕದ್ದು. ನಂತರ ಬಂದ ಸಲಹೆ / ಅಭಿಪ್ರಾಯಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಈ ಮೂಲಕ ತಿಳಿಸಲಾಗಿದೆ.

**ಆಯುಕ್ತರು**
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: ೨೦೦